**ದಿನಾಂಕ:12-09-2019 ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಅಧ್ಯಕ್ಷತೆಯಲ್ಲಿ ತಾಲ್ಲೂಕು ಯೋಜನೆ ಮತ್ತು ಅಭಿವೃದ್ಧಿ ಸಮಿತಿ, ಜಿಲ್ಲಾ ಯೋಜನಾ ಸಮಿತಿ ಮತ್ತು ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಕಾರ್ಯವಿಧಾನಗಳ ಬಗ್ಗೆ ಮಾರ್ಗಸೂಚಿಗಳನ್ನು ಹೊರಡಿಸಿರುವ ಹಿನ್ನೆಲೆಯಲ್ಲಿ ಅವುಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ನಡೆದ ವೀಡಿಯೋ ಸಂವಾದದ ಸಭಾ ನಡವಳಿಗಳು.**

ಪ್ರಥಮವಾಗಿ, ಸಭೆಯ ಅಧ್ಯಕ್ಷರು, ಸಭೆಗೆ ಆಗಮಿಸಿದ್ದ ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಮತ್ತು ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಹಾಗೂ ವೀಡಿಯೋ ಸಂವಾದದಲ್ಲಿ ಆಯಾ ಕೇಂದ್ರದಲ್ಲಿ ಉಪಸ್ಥಿತರಿದ್ದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಮುಖ್ಯ ಯೋಜನಾಧಿಕಾರಿಗಳು, ಎಲ್ಲಾ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಸಹಾಯಕ ಯೋಜನಾಧಿಕಾರಿಗಳನ್ನು ಸ್ವಾಗತಿಸಿದರು.

ಸಭೆಯ ಅಧ್ಯಕ್ಷರು, ಪ್ರಾಸ್ತಾವಿಕವಾಗಿ ಮಾತನಾಡಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ 1993 (ತಿದ್ದುಪಡಿ 2016) ರಂತೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಕ್ರಮವಾಗಿ ಜಿಲ್ಲಾ ಯೋಜನಾ ಸಮಿತಿ ಹಾಗೂ ತಾಲ್ಲೂಕು ಯೋಜನೆ ಮತ್ತು ಅಭಿವೃದ್ಧಿ ಸಮಿತಿ ರಚಿಸಿರುವ ಹಾಗೂ ತ್ರೈಮಾಸಿಕವಾಗಿ ಸಭೆ ನಡೆಸಿ ನಡವಳಿ ದಾಖಲಿಸಿರುವ ಬಗ್ಗೆ ಕೂಲಂಕಷವಾಗಿ ಚರ್ಚಿಸುವ ಹಿನ್ನೆಲೆಯಲ್ಲಿ ವೀಡಿಯೋ ಸಂವಾದ ಏರ್ಪಡಿಸಲಾಗಿರುವುದರ ಮಹತ್ವವನ್ನು ಒತ್ತಿ ಹೇಳಿದರು.

ಪ್ರಸ್ತುತ ರಾಜ್ಯದಲ್ಲಿ ಲಭ್ಯವಿರುವ ಮಾಹಿತಿಗಳನ್ವಯ 22 ಜಿಲ್ಲೆಗಳಲ್ಲಿ ಜಿಲ್ಲಾ ಯೋಜನಾ ಸಮಿತಿಗಳನ್ನು ಹಾಗೂ 56 ತಾಲ್ಲೂಕುಗಳಲ್ಲಿ ತಾಲ್ಲೂಕು ಯೋಜನೆ ಮತ್ತು ಅಭಿವೃದ್ಧಿ ಸಮಿತಿಗಳು ಮಾತ್ರ ರಚನೆಯಾಗಿರುತ್ತವೆ. ಉಳಿದ ಜಿಲ್ಲೆಗಳು ಹಾಗೂ ತಾಲ್ಲೂಕುಗಳು ನೂತನ ಶಾಸಕಾಂಗ ಸಭೆ ಅಸ್ತಿತ್ವಕ್ಕೆ ಬಂದ ನಂತರ ಎಲ್ಲಾ ಜಿಲ್ಲೆಗಳಲ್ಲಿ ಮತ್ತು ತಾಲ್ಲೂಕುಗಳಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ 1993 (ತಿದ್ದುಪಡಿ 2016) ರನ್ವಯ ಕಾರ್ಯನಿರ್ವಹಿಸಿ ಯೋಜನೆಗಳನ್ನು ತಯಾರಿಸಿ ಮೇಲಿನ ಹಂತಕ್ಕೆ ಸಲ್ಲಿಸಬೇಕಾಗಿರುತ್ತದೆ. ಆದರೆ, ಸದರಿ ಪ್ರಕ್ರಿಯೆಯು ಪರಿಣಾಮಕಾರಿಯಾಗಿ ರಾಜ್ಯದಲ್ಲಿ ಅನುಷ್ಠಾನವಾಗುತ್ತಿಲ್ಲ. ಈ ಕುರಿತು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಎಲ್ಲಾ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕಾಧಿಕಾರಿಗಳು ಪ್ರತಿಕ್ರಿಯೆ ನೀಡಬೇಕೆಂದು ಸೂಚಿಸಲಾಯಿತು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಬಾಗಲಕೋಟೆ ರವರು ಸಮಿತಿ ಪುನರ್ ರಚಿಸಲು ನ್ಯಾಯಾಲಯದಿಂದ ತಡೆಯಾಜ್ಞೆ ಇದೆ ಎಂದು ಗಮನ ಸೆಳೆದರು. ತಡೆಯಾಜ್ಞೆಗಳನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳುವಂತೆ ಸೂಚಿಸಲಾಯಿತು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಚಿಕ್ಕಮಗಳೂರು ರವರು ಜಿಲ್ಲಾ ಉಸ್ತುವಾರಿ ಸಚಿವರು ನೇಮಕವಾಗಿಲ್ಲದಿರುವುದರಿಂದ ಜಿಲ್ಲಾ ಯೋಜನಾ ಸಮಿತಿಯು ರಚಿಸಿ ಕಾರ್ಯನಿರ್ವಹಿಸಲು ಸಾಧ್ಯವಾಗಿರುವುದಿಲ್ಲ ಎಂದು ತಿಳಿಸಿದರು. 8 ಜಿಲ್ಲೆಯವರು ಜಿಲ್ಲಾ ಯೋಜನಾ

ಸಮಿತಿಗಳು ನಿರಂತರ ಸಮಿತಿಗಳಾಗಿದ್ದು, ಹಿಂದಿನ ಉಸ್ತುವಾರಿ ಸಚಿವರುಗಳ ಅಧ್ಯಕ್ಷತೆಯಲ್ಲಿ ಸಭೆ ನಡೆದು ನಡವಳಿಗಳನ್ನು ದಾಖಲು ಮಾಡಬೇಕಾಗಿದ್ದು, ಈ ಪ್ರಕ್ರಿಯೆಯು ಅತ್ಯಂತ ಹಿನ್ನೆಡೆಯಾಗಿರುವುದರಿಂದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು ವೈಯಕ್ತಿಕ ಗಮನ ಹರಿಸಿ ಸದರಿ ಸಮಿತಿಗಳು ಸಕ್ರಿಯವಾಗಿ ತಮ್ಮ ಜಿಲ್ಲೆಗಳಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಹೊರಡಿಸಿರುವ ಕಾರ್ಯವಿಧಾನಗಳ ಮಾರ್ಗಸೂಚಿಗಳನ್ವಯ ಕಾರ್ಯನಿರ್ವಹಿಸುವುದು. ತ್ರೈಮಾಸಿಕ ಸಭೆಗಳನ್ನು ನಡೆಸಿ ಅದರ ನಡವಳಿಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಯೋಜನಾ ಇಲಾಖೆ ಹಾಗೂ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಗೆ ಸಲ್ಲಿಸಲು ಸೂಚಿಸಲಾಯಿತು.

ಪ್ರಧಾನ ಕಾರ್ಯದರ್ಶಿ, ಯೋಜನಾ ಇಲಾಖೆ ರವರು ಜಿಲ್ಲಾವಲಯ ಯೋಜನೆಗಳಡಿ ಸಾಧಿಸಿರುವ ಪ್ರಗತಿಯನ್ನು ಆನ್‌ಲೈನ್ ಎಂಪಿಕ್-Decision Support System (DSS) ತಂತ್ರಾಂಶದಲ್ಲಿ ಲಭ್ಯವಿರುವ (ಖಜಾನೆ-1 ಮತ್ತು ಖಜಾನೆ-2 ಆಧಾರಿತ) ಮಾಹಿತಿಗಳನುಸಾರ ಜಿಲ್ಲಾವಾರು ಶ್ರೇಣಿ ನೀಡಲಾಗಿದ್ದು, ಇದರಲ್ಲಿ ಪ್ರಗತಿ ಕುಂಠಿತವಾಗಿರುವ ಜಿಲ್ಲೆಗಳು ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಒದಗಿಸಿದ ಮಾಹಿತಿ ಹಾಗೂ DSS (ಖಜಾನೆ-1 ಮತ್ತು ಖಜಾನೆ-2) ಮಾಹಿತಿಯಲ್ಲಿ ಹೆಚ್ಚಿನ ವ್ಯತ್ಯಾಸ ಕಂಡುಬಂದಿದ್ದು, ಸ್ಪಷ್ಟೀಕರಣ ನೀಡಿ ಮತ್ತು ಇದನ್ನು ತ್ವರಿತವಾಗಿ ಸರಿಪಡಿಸಲು ಕ್ರಮ ಕೈಗೊಳ್ಳಬೇಕೆಂದು ಸೂಚಿಸಿದರು.

ಮುಂದುವರೆದು, ಸದರಿ ಸಮಿತಿಗಳು ತಳಮಟ್ಟದಿಂದ ರಾಜ್ಯಮಟ್ಟದವರೆವಿಗೆ ಯೋಜನೆಗಳನ್ನು ರೂಪಿಸಲು ಕಾಯ್ದೆಯಲ್ಲಿ ನಮೂದಿಸಿದಂತೆ ಗ್ರಾಮ ಮಟ್ಟದಿಂದ ರಾಜ್ಯ ಮಟ್ಟದ ಯೋಜನೆ ರೂಪಿಸುವುದು. ಸದರಿ ಸಮಿತಿಗಳು ಗ್ರಾಮೀಣ ಪ್ರದೇಶದ ಯೋಜನೆಗಳ ಜೊತೆಗೆ ನಗರ ಪ್ರದೇಶದ ಯೋಜನೆಗಳನ್ನು ಒಗ್ಗೂಡಿಸಿ (PRIs ಹಾಗೂ ULBs ಗಳ) ಸಮಗ್ರ ಯೋಜನೆ ರೂಪಿಸಿ ಅನುಷ್ಠಾನಗೊಳಿಸುವ ಬಗ್ಗೆ ತ್ವರಿತ ಕ್ರಮ ಕೈಗೊಳ್ಳಲು ಸೂಚಿಸಿದರು.

ಜಿಲ್ಲಾ ಯೋಜನಾ ಸಮಿತಿ ಹಾಗೂ ತಾಲ್ಲೂಕು ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಕಾರ್ಯ ನಿರ್ವಹಿಸಿ ಆಯಾ ಹಂತದಲ್ಲಿ ಸಮಗ್ರ ಯೋಜನೆಗಳನ್ನು ತಯಾರಿಸಲು ಪ್ರಸ್ತುತ ಆರ್ಥಿಕ ಸಾಲಿನಲ್ಲಿ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯಿಂದ ಪ್ರತಿ ಜಿಲ್ಲಾ ಯೋಜನಾ ಸಮಿತಿಗೆ ಈಗಾಗಲೇ ರೂ.1,00,000/- ಬಿಡುಗಡೆಗೊಳಿಸಲಾಗಿದೆ. ಹಾಗೆಯೇ, ಪ್ರತಿ ತಾಲ್ಲೂಕು ಯೋಜನೆ ಮತ್ತು ಅಭಿವೃದ್ಧಿ ಸಮಿತಿಗೆ ತಲಾ ರೂ.50,000/- ಬಿಡುಗಡೆಗೊಳಿಸಲು ಕ್ರಮ ವಹಿಸಿರುವ ಬಗ್ಗೆ ಪ್ರಸ್ತಾಪಿಸಲಾಯಿತು.

ಮುಂದುವರೆದು, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಯೋಜನಾ ಸಮಿತಿಗಳನ್ನು ಹಾಗೂ ಎಲ್ಲಾ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ತಾಲ್ಲೂಕು ಯೋಜನೆ ಮತ್ತು ಅಭಿವೃದ್ಧಿ ಸಮಿತಿಗಳನ್ನು ಸಕ್ರಿಯಗೊಳಿಸಿ ಪ್ರಸ್ತುತ ಸಾಲಿನ ತ್ರೈಮಾಸಿಕ ಸಭೆಗಳನ್ನು ನಡೆಸಲು ಸೂಚಿಸಿದರು. ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಈಗಾಗಲೇ ಮೊದಲನೇ ಸಭೆ ನಡೆಸಿದ್ದಲ್ಲಿ ಸಭಾ ನಡವಳಿಯನ್ನು ಕಳುಹಿಸಿಕೊಡುವುದು. During People's Plan

Campaign ಎಲ್ಲಾ ಜಿಲ್ಲೆ ಹಾಗೂ ತಾಲ್ಲೂಕುಗಳಲ್ಲಿ ಎರಡನೇ ಸಭೆ ನಡೆಸಿ ಅದರ ನಡವಳಿಗಳನ್ನು ಕಳುಹಿಸಿಕೊಡಲು ಸೂಚಿಸಲಾಯಿತು.

ದಿನಾಂಕ:26-07-2019 ರಂದು ಜಿಲ್ಲಾ ಯೋಜನಾ ಸಮಿತಿ, ತಾಲ್ಲೂಕು ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಹಾಗೂ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಗಳ ಕಾರ್ಯವಿಧಾನಗಳ ಬಗ್ಗೆ ಮಾರ್ಗಸೂಚಿಗಳನ್ನು ಹೊರಡಿಸಲಾಗಿದ್ದು, ಅದರಂತೆ ಎಲ್ಲಾ ವೀಡಿಯೋ ಸಂವಾದದಲ್ಲಿ ಭಾಗವಹಿಸಿರುವ ಅಧಿಕಾರಿ/ಸಿಬ್ಬಂದಿಗಳಿಗೆ ಪಿ.ಪಿ.ಟಿ. ಯೊಂದಿಗೆ ಪ್ರತಿ ಅಂಶಗಳನ್ನು ವಿವರಿಸಿ ಅದರಂತೆ, ಮುಂದಿನ ಕ್ರಮ ಕೈಗೊಳ್ಳಬೇಕೆಂದು ಸೂಚಿಸಲಾಯಿತು.

ಮುಂದುವರೆದು, ದೂರದೃಷ್ಟಿಯುಳ್ಳ ದೀರ್ಘಕಾಲಿಕ ಸಮಗ್ರ ಯೋಜನೆಗಳನ್ನು ತಾಲ್ಲೂಕು ಮಟ್ಟದಲ್ಲಿ ಕ್ರೋಢೀಕರಣಗೊಂಡು ಅವುಗಳನ್ನು ಜಿಲ್ಲಾ ಮಟ್ಟದಲ್ಲಿ ಕ್ರೋಢೀಕರಣಗೊಳಿಸಲು ಜಿಲ್ಲಾ ಯೋಜನಾ ಸಮಿತಿಯನ್ನು ಅತ್ಯಂತ ಪರಿಣಾಮಕಾರಿಯಾಗಿ ಬಳಸಿಕೊಳ್ಳಲು ಕಾಯ್ದೆಯು ಅವಕಾಶ ಮಾಡಿಕೊಟ್ಟಿರುತ್ತದೆ. ಈ ಸದಾವಕಾಶವನ್ನು ಎಲ್ಲಾ ಜಿಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತ್ರೈಮಾಸಿಕ ಸಭೆಗಳನ್ನು ಏರ್ಪಡಿಸಲು ಕ್ರಮ ಕೈಗೊಳ್ಳಬೇಕೆಂದು ಹಾಗೂ ಉಸ್ತುವಾರಿ ಸಚಿವರುಗಳಿಗೆ ಪತ್ರ ಬರೆದು ಜಿಲ್ಲಾ ಯೋಜನಾ ಸಮಿತಿಯನ್ನು ಸಕ್ರಿಯಗೊಳಿಸಬೇಕೆಂದು ಸೂಚಿಸಲಾಯಿತು.

ಗ್ರಾಮೀಣ ಹಾಗೂ ನಗರ ಪ್ರದೇಶದ ಎಲ್ಲಾ ನಾಗರೀಕರಿಗೆ ನಿಗದಿಪಡಿಸಿದ ಕುಡಿಯುವ ನೀರನ್ನು ಸರಬರಾಜು ಮಾಡುವುದು ಹಾಗೂ ಉತ್ತಮ ಗುಣಮಟ್ಟದ ರಸ್ತೆಗಳನ್ನು ಅಭಿವೃದ್ಧಿ ಮಾಡುವುದು ಅತ್ಯಗತ್ಯವಾಗಿರುತ್ತದೆ. ಇಂತಹ ಯೋಜನೆಗಳನ್ನು ರೂಪಿಸುವಾಗ PRIs ಹಾಗೂ ULBs ಗಳು ಒಟ್ಟಾರೆ ಚರ್ಚಿಸಿ ಸಮಗ್ರ ಯೋಜನೆ ತಯಾರಿಸಿ ತಾಲ್ಲೂಕು ಮಟ್ಟದಲ್ಲಿ ಸಮರ್ಪಕವಾಗಿ ಅನುಷ್ಠಾನಗೊಳಿಸಿದ್ದಲ್ಲಿ ಜನರಿಗೆ ಮೂಲಭೂತ ಸೌಕರ್ಯ ನೀಡುವಲ್ಲಿ ಹೆಚ್ಚಿನ ಫಲಶೃತಿ ದೊರಕುತ್ತದೆ.

ಗ್ರಾಮ ಪಂಚಾಯತಿಗಳಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ನೇರವಾಗಿ ಅನುಷ್ಠಾನಗೊಳಿಸುತ್ತಿರುವ ಪ್ರಸ್ತುತ ಸಾಲಿನಲ್ಲಿ 6 ಯೋಜನೆಗಳನ್ನು ಗ್ರಾಮ ಪಂಚಾಯತಿವಾರು ಅನುದಾನ ಹಂಚಿಕೆ ಮಾಡಿದ ಮಾಹಿತಿಯ ಕೈಪಿಡಿಯನ್ನು ಈಗಾಗಲೇ ಪ್ರಕಟಿಸಲಾಗಿದೆ. ಮುಂದಿನ ಸಾಲಿನಲ್ಲಿ ಇನ್ನಿತರ ಯೋಜನೆಗಳ ಅನುದಾನದ ಮಾಹಿತಿಯ ಕೈಪಿಡಿಯನ್ನು ಹೊರತರಲು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

ಪ್ರಸ್ತುತ ಜಿಲ್ಲಾ ಯೋಜನಾ ಸಮಿತಿ ಹಾಗೂ ತಾಲ್ಲೂಕು ಯೋಜನೆ ಮತ್ತು ಅಭಿವೃದ್ಧಿ ಸಮಿತಿಗಳ ರಚನೆ, ಸಭೆ ನಡೆಸುವುದು, ಯೋಜನಾ ಪ್ರಕ್ರಿಯೆ ಇವೇ ಮುಂತಾದ ವಿಷಯಗಳ ಕುರಿತು ಕೂಲಂಕಷವಾಗಿ ಚರ್ಚೆ ನಡೆಸಿ ಸಭೆಯು ಈ ಕೆಳಕಂಡ ನಿರ್ಣಯಗಳನ್ನು ಕೈಗೊಂಡಿತು.

- ಜಿಲ್ಲಾ ಯೋಜನಾ ಸಮಿತಿಗಳು ಸಂವಿಧಾನಾತ್ಮಕವಾಗಿ ನಿರಂತರ/ಶಾಶ್ವತ ಸಮಿತಿಗಳಾಗಿದ್ದು ಅದರ ಆಯ್ಕೆಯಾದ/ಚುನಾಯಿತ ಸದಸ್ಯರುಗಳ ಕಾಲಾವಧಿ co-terminus with the term ಆಗಿರುತ್ತದೆ.

- ಜಿಲ್ಲಾ ಯೋಜನಾ ಸಮಿತಿಯು ಜಿಲ್ಲಾ, ತಾಲ್ಲೂಕು, ಗ್ರಾಮ ಪಂಚಾಯತಿ ಹಾಗೂ ಪಟ್ಟಣ ಪಂಚಾಯತಿಗಳು ತಯಾರಿಸಿದ ಯೋಜನೆಗಳನ್ನು ಕ್ರೋಢೀಕರಿಸತಕ್ಕದ್ದು ಮತ್ತು ಜಿಲ್ಲೆಗೆ ಸಂಬಂಧಿಸಿದಂತೆ ಅಭಿವೃದ್ಧಿ ಯೋಜನೆಯನ್ನು ತಯಾರಿಸುವ ಜವಾಬ್ದಾರಿ ಇರುತ್ತದೆ. ಆದುದರಿಂದ, ತ್ರೈಮಾಸಿಕವಾಗಿ ಜಿಲ್ಲಾ ಯೋಜನಾ ಸಮಿತಿ ಮತ್ತು ತಾಲ್ಲೂಕು ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಸಭೆಯು ಖಡ್ಡಾಯವಾಗಿ ಜರುಗಿಸಲು ಕ್ರಮ ವಹಿಸಬೇಕೆಂದು ಸೂಚಿಸಿದರು.
- ಗ್ರಾಮ ಪಂಚಾಯತ್ ಮಟ್ಟದಲ್ಲಿ ದೂರದೃಷ್ಟಿ, ವಾರ್ಷಿಕ ಯೋಜನೆಗಳ ತಯಾರಿಕೆ ಮತ್ತು ಅದರ ಸಮರ್ಪಕ ಅನುಷ್ಠಾನಕ್ಕೆ ಗ್ರಾಮ ಪಂಚಾಯತ್ ಮಟ್ಟದ ಅಧಿಕಾರಿ/ಸಿಬ್ಬಂದಿಗಳಿಗೆ ತಾಂತ್ರಿಕ ಜ್ಞಾನದ ಕೊರತೆಯಿರುವುದನ್ನು ಸಭೆಯು ಮನಗೊಂಡು ಅವಶ್ಯ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಸೂಚಿಸಿದರು.
- ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಜನರ ಅಭಿವೃದ್ಧಿಗೆ ವಿಶೇಷ ಸಭೆ ಕರೆದು ಮೀಸಲಿಟ್ಟಿರುವ ಅನುದಾನದ ಸಮರ್ಪಕ ಬಳಕೆಗೆ ಒತ್ತು ನೀಡಲು ತಿಳಿಸಿದರು.
- ಯಾವ ಯಾವ ಜಿಲ್ಲೆ ಹಾಗೂ ತಾಲ್ಲೂಕುಗಳಲ್ಲಿ ಸಮಿತಿ ರಚಿಸಿರುವುದಿಲ್ಲವೋ ಅಥವಾ ಕಾರ್ಯನಿರ್ವಹಿಸುತ್ತಿಲ್ಲವೋ ಅವುಗಳ ಬಗ್ಗೆ ಸ್ಪಷ್ಟೀಕರಣ ನೀಡಿ ಸಭೆ ನಡೆದ ನಡವಳಿಗಳನ್ನು ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಗೆ ಕಳುಹಿಸಿಕೊಡುವುದು ಹಾಗೂ ಸಭೆ ನಡೆಸದಿರುವುದರ ಬಗ್ಗೆ ಕಾರಣಗಳನ್ನು ನೀಡುವಂತೆ ಸೂಚಿಸಿದರು.
- ಹರಪ್ಪನಹಳ್ಳಿ ತಾಲ್ಲೂಕು ಬಳ್ಳಾರಿಗೆ ಸೇರಿದ್ದು, ದಾವಣಗೆರೆ ಮತ್ತು ಬಳ್ಳಾರಿ ಜಿಲ್ಲೆಗೆ ಸಂಬಂಧಿಸಿದಂತೆ ಸದಸ್ಯರುಗಳ ಸಂಖ್ಯೆ ಮರು ನಿಗದಿಪಡಿಸಿ ಆದೇಶ ನೀಡಲು ಕ್ರಮ.
- ಜಿಲ್ಲಾ ಯೋಜನಾ ಸಮಿತಿ ಮತ್ತು ತಾಲ್ಲೂಕು ಯೋಜನೆ ಮತ್ತು ಅಭಿವೃದ್ಧಿ ಸಮಿತಿಗೆ ಮಾರ್ಗಸೂಚಿಗಳಲ್ಲಿ ತಿಳಿಸಿರುವಂತೆ ವಾರ್ಷಿಕವಾಗಿ ಗ್ರಾಮ, ತಾಲ್ಲೂಕು, ಜಿಲ್ಲಾ, ಪಟ್ಟಣ ಪಂಚಾಯತಿಗಳು ಹಾಗೂ ಪುರಸಭೆಗಳು ವಂತಿಗೆ ನೀಡುವುದರಿಂದ ತ್ರೈಮಾಸಿಕ ಸಭೆಗಳನ್ನು ನಡೆಸಲು ಯಾವುದೇ ಹಣಕಾಸಿನ ಕೊರತೆ ಉಂಟಾಗುವುದಿಲ್ಲ ಎಂದು ಸಭೆಯ ಗಮನಕ್ಕೆ ತಂದರು.

ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ರವರು ಸಭೆಯನ್ನುದ್ದೇಶಿಸಿ ಮಾತನಾಡಿ, ತಳಮಟ್ಟದಿಂದ ರಾಜ್ಯಮಟ್ಟದವರೆವಿಗೆ ಯೋಜನೆ ರೂಪಿಸಲು ಅನುವಾಗಲು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆಯಡಿ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯು ರಚಿಸಿದ್ದು ಕಾನೂನಾತ್ಮಕವಾಗಿ ಯೋಜನೆ ರೂಪಿಸಲು ಅನುವು ಮಾಡಿಕೊಟ್ಟಿರುವ ಈ ಸದಾವಕಾಶವನ್ನು ಬಳಸಿಕೊಂಡು ನಿಮ್ಮ ಗ್ರಾಮದ ಯೋಜನೆ, ನೀವೇ ರೂಪಿಸಿಕೊಂಡು ಅನುಷ್ಠಾನಗೊಳಿಸಿ ನಿಮ್ಮ ಗ್ರಾಮದ ಅಭಿವೃದ್ಧಿ ಮೂಲಕ, ದೇಶದ ಅಭಿವೃದ್ಧಿಗೆ ಶ್ರಮಿಸಲು ಕರೆ ನೀಡಿದರು.

ನಿರ್ದೇಶಕರು, ಯೋಜನೆ, ಕಾರ್ಯಕ್ರಮ ಸಂಯೋಜನೆ ಹಾಗೂ ಸಾಂಖ್ಯಿಕ ಇಲಾಖೆ ರವರು ಯೋಜನಾ ಇಲಾಖೆಯಿಂದ ಜಿಲ್ಲಾ ಯೋಜನಾ ಸಮಿತಿಗೆ ಅನುದಾನ ಬಿಡುಗಡೆಗೊಳಿಸಲಾಗುತ್ತಿದೆ ಎಂದು ಸಭೆಯ ಗಮನಕ್ಕೆ ತಂದರು. ಅದನ್ನು ಸದುಪಯೋಗಪಡಿಸಿಕೊಂಡು ಸಮರ್ಪಕ ಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸಲು ಕರೆ ನೀಡಿದರು.

ವೀಡಿಯೋ ಸಂವಾದದಲ್ಲಿ ಭಾಗವಹಿಸಿದ ಸಮಿತಿಯ ತಜ್ಞರುಗಳು ಎಲ್ಲಾ ಇಲಾಖಾ ಯೋಜನೆಗಳ ಮಾಹಿತಿಯನ್ನು ಒದಗಿಸುವುದು. ಪ್ರತಿ ಮಾಹೆ ವೀಡಿಯೋ ಸಂವಾದದ ಮೂಲಕ ಅನುದಾನ ವಿನಿಯೋಗಕ್ಕೆ ಸಂಬಂಧಿಸಿದಂತೆ ಪ್ರಗತಿ ಪರಿಶೀಲನಾ ಸಭೆ ನಡೆಸಬೇಕೆಂದು ಕೋರಿದರು. ಈ ರೀತಿಯಾಗಿ ಮೇಲ್ವಿಚಾರಣೆ ನಡೆಸುವುದರಿಂದ ಯೋಜನಾ ಪ್ರಕ್ರಿಯೆಯು ಗ್ರಾಮ/ವಾರ್ಡ್ ಹಂತದಿಂದ ರಾಜ್ಯಮಟ್ಟದವರೆವಿಗೆ ಬಲವೃದ್ಧಿಯಾಗುವುದಲ್ಲದೇ ಜಿಲ್ಲಾ ಹಾಗೂ ತಾಲ್ಲೂಕುಗಳಲ್ಲಿ ಉದ್ಭವಿಸುವ ಸಮಸ್ಯೆಗಳಿಗೆ ಪರಿಹಾರ ಕಂಡುಹಿಡಿಯಲು ಸಹಕಾರಿಯಾಗುವುದೆಂದು ತಿಳಿಸಿದರು. ಇದಕ್ಕೆ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಸಹಮತಿಸಿ ಅದರಂತೆ ಅಗತ್ಯ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

- ಗ್ರಾಮ, ತಾಲ್ಲೂಕು ಹಾಗೂ ಜಿಲ್ಲಾ ಯೋಜನೆಯ ಮಹತ್ವ ಹೆಚ್ಚಿಸಿ ಸ್ವಯಂಚಾಲಿತವಾಗಿ ಗ್ರಾಮಗಳು ಗ್ರಾಮ ಸ್ವರಾಜ್‌ಗಳಾಗಿ ಪರಿವರ್ತನೆಗೊಳ್ಳುವ ಆಶಯವನ್ನು ಅಭಿಪ್ರಾಯಿಸಿ ಜಿಲ್ಲಾ ಯೋಜನಾ ಸಮಿತಿ ಹಾಗೂ ತಾಲ್ಲೂಕು ಯೋಜನೆ ಮತ್ತು ಅಭಿವೃದ್ಧಿ ಸಮಿತಿ ರಚಿಸಿರುವ ಆದೇಶವನ್ನು sdpdc2018@gmail.com ಗೆ ಕಳುಹಿಸಿಕೊಡುವುದು.

ವೀಡಿಯೋ ಸಂವಾದದಲ್ಲಿ ಭಾಗೀದಾರರಾಗಿ ಸಲಹೆ ನೀಡಿದ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷರು ಹಾಗೂ ಸಮಿತಿಯ ತಜ್ಞ ಸದಸ್ಯರುಗಳಿಗೆ, ಅಧಿಕಾರಿಗಳಿಗೆ ವಂದನೆ ಸಲ್ಲಿಸಿ ಸಭೆ ಮುಕ್ತಾಯಗೊಳಿಸಲಾಯಿತು.

| (ಉಮಾ ಮಹಾದೇವನ್) | (ಶಾಲಿನಿ ರಜನೀಶ್) | (ಎಲ್.ಕೆ.ಅತೀಕ್) |
|---|---|---|
| ...ರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) | ಸರ್ಕಾರದ ಪ್ರಧಾನ ಕಾರ್ಯದರ್ಶಿ ಯೋಜನೆ, | ಸರ್ಕಾರದ ಪ್ರಧಾನ ಕಾರ್ಯದರ್ಶಿ |
| ...ಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ | ಕಾರ್ಯಕ್ರಮ ಸಂಯೋಜನೆ ಹಾಗೂ ಸಾಂಖ್ಯಿಕ ಇಲಾಖೆ | ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇ... |

ಸಂಖ್ಯೆ: ಗ್ರಾಅಪ 106 ಜಿಪಸ 2019

**ಗೆ:**

1) ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿರವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿ ಕಟ್ಟಡ, ಬೆಂಗಳೂರು.
2) ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
3) ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಯೋಜನಾಧಿಕಾರಿಗಳು.
4) ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತ್‌ಗಳ ಕಾರ್ಯನಿರ್ವಹಣಾಧಿಕಾರಿಗಳು.
5) ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತ್‌ಗಳ ಸಹಾಯಕ ನಿರ್ದೇಶಕರು (ಯೋಜನೆ).
6) ನಿರ್ದೇಶಕರು (ಪಂ.ರಾಜ್-I), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

7) ನಿರ್ದೇಶಕರು (ಪಂ.ರಾಜ್– II), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

8) ನಿರ್ದೇಶಕರು, ಯೋಜನಾ ಉಸ್ತುವಾರಿ ಮತ್ತು ಮಾಹಿತಿ ವಿಭಾಗ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

9) ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಲಲಿತಮಹಲ್, ಮೈಸೂರು.

10) ಡಾ॥ ಗಣೇಶ್ ಪ್ರಸಾದ್, ಬೋಧಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಲಲಿತಮಹಲ್, ಮೈಸೂರು.

11) ಶ್ರೀ ಎಸ್.ನಂಜುಂಡರಾವ್, ಸಮಾಲೋಚಕರು (ಯೋಜನೆ), ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ, ಬೆಂಗಳೂರು.

12) ಶ್ರೀ ಹೆಚ್.ವೇಣುಗೋಪಾಲ್, ಸಮಾಲೋಚಕರು (ಸಂಶೋಧನಾಧಿಕಾರಿ), ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ, ಬೆಂಗಳೂರು.

13) ಕಛೇರಿ ಪ್ರತಿ.

ಪ್ರತಿ:

1) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಹಾಗೂ ಸಾಂಖ್ಯಿಕ ಇಲಾಖೆ ರವರ ಆಪ್ತ ಕಾರ್ಯದರ್ಶಿ.

2) ಸರ್ಕಾರದ ಪ್ರಧಾನಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿ.

3) ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ.